Akashvani : Bangalore
Regional Bulletin In Kannada
23.09.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೇಂದ್ರ ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆಗೆ ೬ ವರ್ಷ ಪೂರ್ಣ; ೭ ಕೋಟಿ ೭೯ ಲಕ್ಷ ಮಂದಿಗೆ ಯೋಜನೆಯ ಲಾಭ
- ಸಂಚಾರಿ ನಿಯಮ ಪಾಲಿಸದವರ ಲೈಸೆನ್ಸ್ ರದ್ದು ಮಾಡುವಂತೆ ಸಾರಿಗೆ ಸಚಿವರಿಗೆ ಮುಖ್ಯಮಂತ್ರಿ ಸೂಚನೆ
- ದಾವಣಗೆರೆಯಲ್ಲಿ ೧೨೫ ಕೋಟಿ ರೂಪಾಯಿ ವೆಚ್ಚದ ಅತ್ಯಾಧುನಿಕ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ ನಿರ್ಮಾಣ
- ಮಂಡ್ಯದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಹಿನ್ನಲೆ; ಉತ್ತರಕನ್ನಡ ಜಿಲ್ಲೆಯ ಭುವನಗಿರಿಯಲ್ಲಿಂದು ಕನ್ನಡಜ್ಯೋತಿ ರಥಯಾತ್ರೆಗೆ ಚಾಲನೆ

<><*<><>*><>

ಕೇಂದ್ರ ಸರ್ಕಾರದ ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆಗೆ ೬ ವರ್ಷ ತುಂಬಿದೆ. ಶೇಕಡ ೪೯ ರಷ್ಟು ಮಹಿಳೆಯರಿಗೆ ಆಯುಷ್ಮಾನ್ ಭಾರತ್ ಕಾರ್ಡ್ ವಿತರಿಸಿದ್ದು, ೭ ಕೋಟಿ ೭೯ ಲಕ್ಷ ಮಂದಿ ಯೋಜನೆಯ ಸೌಲಭ್ಯ ಪಡೆದುಕೊಂಡಿದ್ದಾರೆ. ಈ ಪೈಕಿ ೩ ಕೋಟಿ ೬೧ ಲಕ್ಷ ಮಹಿಳೆಯರಿಗೆ ಆರೋಗ್ಯ ಸೌಲಭ್ಯ ದೊರಕಿದೆ. ಉತ್ತರಪ್ರದೇಶ, ಮಧ್ಯಪ್ರದೇಶ, ಬಿಹಾರ್ ಮತ್ತು ಮಹಾರಾಷ್ಟ್ರ ರಾಜ್ಯಗಳು ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳುವಲ್ಲಿ ಅಗ್ರಸ್ಥಾನದಲ್ಲಿವೆ. ತಮಿಳುನಾಡು, ಕರ್ನಾಟಕ, ಆಂಧ್ರಪ್ರದೇಶ ಮತ್ತು ಕೇರಳ ರಾಜ್ಯಗಳು ಸಹ ಯೋಜನೆಯನ್ನು ಸೂಕ್ತ ರೀತಿಯಲ್ಲಿ ಬಳಸಿಕೊಂಡಿವೆ. ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ್ ಆರೋಗ್ಯ ಯೋಜನೆಯಡಿ ಪ್ರತಿಯೊಂದು ಕುಟುಂಬಕ್ಕೆ ವಾರ್ಷಿಕ ೫ ಲಕ್ಷ ರೂಪಾಯಿವರೆಗೆ ಆರೋಗ್ಯ ಸೌಲಭ್ಯ ದೊರೆಯಲಿದ್ದು, ೧೨ ಕೋಟಿ ೩೭ ಲಕ್ಷ ಕುಟುಂಬಗಳ ೫೫ ಕೋಟಿ ಫಲಾನುಭವಿಗಳು ಯೋಜನೆಯನ್ನು ಬಳಸಿಕೊಂಡಿದ್ದಾರೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಂಗನವಾಡಿ, ಆಶಾಕಾರ್ಯಕರ್ತೆಯರು, ಲಿಂಗತ್ವ ಅಲ್ಪ ಸಂಖ್ಯಾತರು, ಕಟ್ಟಡ ನಿರ್ಮಾಣ ಕಾರ್ಮಿಕರಿಗೂ ಸೌಲಭ್ಯ ಕಲ್ಪಿಸಲಾಗಿದೆ. ೭೦ ವರ್ಷ ವಯೋಮಿತಿಗೂ ಮೀರಿದ ೬ ಕೋಟಿ ಹಿರಿಯ ನಾಗರಿಕರೂ ಯೋಜನೆಯಿಂದ ಲಾಭ ಪಡೆದುಕೊಂಡಿದ್ದಾರೆ. ಯಾವುದೇ ಆದಾಯ ಮಿತಿಯ ಷರತ್ತು ಇಲ್ಲದಂತೆ ೭೦ ವರ್ಷ ಮೀರಿದ ಎಲ್ಲ ಹಿರಿಯ ನಾಗರಿಕರಿಗೆ ಈ ಯೋಜನೆಯ ಸೌಲಭ್ಯ ದೊರಕಿಸಿಕೊಡಲು ನಿರ್ಧರಿಸಲಾಗಿದ್ದು, ಇದಕ್ಕೆ ಮುಂದಿನ ತಿಂಗಳು ಪ್ರಧಾನಿ ನರೇಂದ್ರ

ಮೋದಿ ಅವರು, ವಿಸ್ತರಿತ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ್ ಆರೋಗ್ಯ ಯೋಜನೆಯನ್ನು ಉದ್ಘಾಟಿಸಲಿದ್ದಾರೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ತಿಳಿಸಿದ್ದಾರೆ.

<><*<><>*><>

ಸಂಚಾರಿ ನಿಯಮ ಪಾಲಿಸದೆ ವಾಹನ ಓಡಿಸುವವರ, ಕುಡಿದು ವಾಹನ ಚಲಾಯಿಸುವರ ಚಾಲನಾ ಪರವಾನಗಿಯನ್ನು ರದ್ದು ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾರಿಗೆ ಸಚಿವರಿಗೆ ಸೂಚನೆ ನೀಡಿದ್ದಾರೆ. ವಿಧಾನಸೌಧದ ಎದುರು ಇಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರದ ೬೫ ಆಧುನಿಕ ಜೀವ ರಕ್ಷಕ ಸವಲತ್ತುಗಳಿರುವ ಆಂಬುಲೆನ್ಸ್‌ಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಮುಖ್ಯಮಂತ್ರಿ, ಸಂಚಾರಿ ನಿಯಮಗಳನ್ನು ಶಿಸ್ತಿನಿಂದ ಪಾಲಿಸಿದರೆ ಬಹುತೇಕ ಅಪಘಾತಗಳು ಸಂಭವಿಸುವುದೇ ಇಲ್ಲ. ಕುಡಿದು ವಾಹನ ಚಾಲನೆ ಮಾಡಬಾರದು ಎಂದು ಯುವ ಜನರಿಗೆ ಕರೆ ನೀಡಿದರು. ಅಪಘಾತದ ಸಂದರ್ಭದಲ್ಲಿ ಗೋಲ್ಡನ್ ಹವರ್ ಬಹಳ ಮುಖ್ಯ. ಈ ಒಂದು ಗಂಟೆಯಲ್ಲಿ ಅಗತ್ಯ ತುರ್ತು ಚಿಕಿತ್ಸೆ ಸಿಕ್ಕರೆ ನೂರಾರು ಪ್ರಾಣಗಳನ್ನು ಉಳಿಸಲು ಸಾಧ್ಯವಿದೆ. ಈ ಪ್ರಾಣ ಉಳಿಸುವ ಕಾರ್ಯಕ್ಕೆ ಈ ಆಂಬುಲೆನ್‌ಗಳು ನೆರವಾಗುತ್ತವೆ ಎಂದರು. ಸದ್ಯ ೬೫ ಅತ್ಯಾಧುನಿಕ ಮತ್ತು ಪ್ರಾಥಮಿಕ ಆಂಬುಲೆನ್ಸ್‌ಗಳನ್ನು ಲೋಕಾರ್ಪಣೆ ಮಾಡಿದ್ದೇವೆ. ಮುಂದಿನ ದಿನಗಳಲ್ಲಿ ಇಡೀ ರಾಜ್ಯಕ್ಕೆ ಆಧುನಿಕ ಸವಲತ್ತುಗಳಿರುವ ಆಂಬುಲೆನ್‌ಗಳನ್ನು ವಿಸ್ತರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಕಾರ್ಯಕ್ರಮದಲ್ಲಿ ಸಚಿವರಾದ ದಿನೇಶ್ ಗುಂಡೂರಾವ್, ರಾಮಲಿಂಗಾರೆಡ್ಡಿ, ಗ್ಯಾರಂಟಿ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಎಚ್.ಎಂ.ರೇವಣ್ಣ ಮತ್ತಿತರರು ಉಪಸ್ಥಿತರಿದ್ದರು.

<><*<><>*><>

ಸ್ಮಾರ್ಟ್ ಸಿಟಿ ಮತ್ತು ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅನುದಾನದಲ್ಲಿ ದಾವಣಗೆರೆಯಲ್ಲಿ ನಿರ್ಮಾಣ ಮಾಡಿರುವ ನೂತನ ಕೆಎಸ್‌ಆರ್‌ಸಿಟಿ ಬಸ್ ನಿಲ್ದಾಣದ ಸೌಲಭ್ಯ ಎಲ್ಲರಿಗೂ ದೊರಕುವಂತಾಗಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಹೇಳಿದರು. ನವೀಕೃತ ಬಸ್ ನಿಲ್ದಾಣದಲ್ಲಿ ಹೊಸ ಬಸ್ ಮಾರ್ಗಗಳಿಗೆ ಚಾಲನೆ ನೀಡಿ ಮಾತನಾಡಿದ ಸಚಿವರು, ೧೨೦ ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕವಾಗಿ ನಿರ್ಮಾಣಗೊಂಡಿರುವ ನಿಲ್ದಾಣ ರಾಜ್ಯ, ಅಂತರಾಜ್ಯಗಳಿಗೆ ಸಂಪರ್ಕ ಕಲ್ಪಿಸಲಿದೆ ಎಂದರು. ನೂತನ ಬಸ್ ನಿಲ್ದಾಣಕ್ಕೆ ಮಾಜಿ ಶಾಸಕ ದಿವಂಗತ ಪಂಪಾಪತಿ ಅವರ ಹೆಸರು ನಾಮಕರಣ ಮಾಡುವ ಕುರಿತು ದಾವಣಗೆರೆ ಮಹಾನಗರ ಪಾಲಿಕೆಗೆ ಸೂಚನೆ ನೀಡಲಾಗುವುದು ಎಂದು ಹೇಳಿದರು.

<><*<><>*><>

ಗ್ರೀನ್ ಸಿಟಿ ಪರಿಕಲ್ಪನೆ ಅಡಿ ದಾವಣಗೆರೆ ನಗರದಲ್ಲಿ ೧ ಲಕ್ಷ ವಿವಿಧ ಜಾತಿಯ ಸಸಿಗಳನ್ನ ಬೆಳೆಸಲು ಉದ್ದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಹೇಳಿದರು. ನಗರದ ಶಿವ ಪಾರ್ವತಿ ಬಡಾವಣೆ, ಜೆ.ಹೆಚ್.ಪಟೇಲ್ ಬಡಾವಣೆ ಹಾಗೂ ಬನಶಂಕರಿ ಬಡಾವಣೆಯಲ್ಲಿ ಅರಣ್ಯ ಇಲಾಖೆಯಿಂದ ಏರ್ಪಡಿಸಲಾದ ಸಸಿ ನಡೆಯುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.  ಉತ್ತಮ ಆರೋಗ್ಯಕ್ಕೆ ಶುದ್ಧ ಗಾಳಿ ಸಿಗಬೇಕು, ಹಸಿರು ನಗರವಾಗಿ ಪರಿವರ್ತನೆಯಾಗಬೇಕೆಂದು ನಗರ ವ್ಯಾಪ್ತಿಯಲ್ಲಿ ವಿವಿಧ ಜಾತಿಯ ಗಿಡಗಳನ್ನು ನೆಡಲು, ಅದರಲ್ಲಿಯೂ ಹೆಚ್ಚು ಆಕ್ಸಿಜನ್ ಉತ್ಪಾದಿಸುವ ಮರ, ಗಿಡಗಳನ್ನು ಬೆಳೆಸಲಾಗುತ್ತದೆ ಎಂದರು. ಈ ಗಿಡಗಳನ್ನು ಪೋಷಿಸಲು ಸ್ಥಳೀಯ ನಿವಾಸಿಗಳು ಸಹ ಕೈಜೋಡಿಸಿ ಬೆಳೆಸಬೇಕು, ಇದರಿಂದ ಮುಂದಿನ ಪೀಳಿಗೆಗೆ ಉತ್ತಮ ಪರಿಸರ ನಿರ್ಮಾಣ ಮಾಡಲು ಸಾಧ್ಯವಾಗಲಿದೆ ಎಂದು ಡಾ.ಗಂಗಾಧರ ಸ್ವಾಮಿ ತಿಳಿಸಿದರು.

<><*<><>*><>

ಡಿಸೆಂಬರ್ ೨೦ ರಿಂದ ೨೨ ರ ವರೆಗೆ ಮಂಡ್ಯ ಜಿಲ್ಲೆಯಲ್ಲಿ ನಡೆಯುವ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕನ್ನಡ ಜ್ಯೋತಿ ರಥಯಾತ್ರೆಗೆ, ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ಭುವನಗಿರಿಯಲ್ಲಿರುವ ರಾಜ್ಯದ ಏಕೈಕ ಕನ್ನಡಾಂಬೆ ಭುವನೇಶ್ವರಿ ದೇವಿಯ ದೇಗುಲದಲ್ಲಿಂದು ಮೀನುಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಚಾಲನೆ ನೀಡಿದರು. ಜಿಲ್ಲಾಡಳಿತ, ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಮಂಡ್ಯದಲ್ಲಿ ನಡೆಯುವ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮೇಳನದ ಅಂಗವಾಗಿ ಕನ್ನಡ ಜ್ಯೋತಿ ರಥಯಾತ್ರೆಗೆ ಚಾಲನೆ ಕಾರ್ಯಕ್ರಮ ನಡೆಯಿತು. ನಂತರ ಮಾತನಾಡಿದ ಸಚಿವರು, ಕದಂಬರ ಆರಾಧ್ಯ ದೇವರಾದ ಭುವನೇಶ್ವರಿ ಪುಣ್ಯ ಕ್ಷೇತ್ರವಾದ ಜಿಲ್ಲೆಯಿಂದ ಪ್ರಾರಂಭವಾಗುವ ಕನ್ನಡ ಜ್ಯೋತಿ ರಥಯಾತ್ರೆ ರಾಜ್ಯದ ೩೧ ಜಿಲ್ಲೆ ಸೇರಿದಂತೆ ೬ ಬೇರೆ ಬೇರೆ ರಾಜ್ಯದ ಗಡಿ ಪ್ರದೇಶದಲ್ಲಿ ಸಂಚರಿಸಿ ೮೭ ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುವ ಸಕ್ಕರೆ ನಾಡು ಮಂಡ್ಯ ಜಿಲ್ಲೆಗೆ ತಲುಪಲಿದೆ ಎಂದರು. ವಿಶೇಷವಾಗಿ ಕರ್ನಾಟಕ ಎಂದು ನಾಮಕರಣವಾಗಿ ೫೦ರ ಸಂಭ್ರಮವನ್ನು ರಾಜ್ಯದೆಲ್ಲೆಡೆ ವಿಜೃಂಭಣೆಯಿಂದ ಆಚರಿಸಲಾಗಿದ್ದು, ಅದೇ ರೀತಿ ಡಿಸೆಂಬರ್ ೨೦ ರಿಂದ ಮಂಡ್ಯ ಜಿಲ್ಲೆಯಲ್ಲಿ ನಡೆಯಲಿರುವ ಕನ್ನಡ ಸಾಹಿತ್ಯ ಸಮ್ಮೇಳನ ಅತ್ಯಂತ ವಿಜೃಂಭಣೆಯಿಂದ ಆಚರಿಸುವ ನಿಟ್ಟಿನಲ್ಲಿ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡಲಿದ್ದು, ಸಮ್ಮೇಳನಕ್ಕೆ ೩೦ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಲಿದೆ ಎಂದರು.

<><*<><>*><>

ಉತ್ತರಕನ್ನಡ ಜಿಲ್ಲೆಯ ದಾಂಡೇಲಿಯಲ್ಲಿ ವಿವಿಧ ಸಂಘ-ಸಂಸ್ಥೆಗಳ ವತಿಯಿಂದ ಅಂಬೇವಾಡಿಯಿಂದ ಸಾರಿಗೆ ಬಸ್ ನಿಲ್ದಾಣದವರೆಗೆ 'ಸ್ವಚ್ಛತಾಹಿ ಸೇವಾ' ಅಭಿಯಾನದಡಿ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು. ಜಾಥಾಕ್ಕೆ ಸರಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದ ಪ್ರಾಚಾರ್ಯ  ದತ್ತಾತ್ರಿ ಚಾಲನೆ ನೀಡಿ, ಎಲ್ಲಿ ಸ್ವಚ್ಛತೆ ಇರುತ್ತದೆ. ಅಲ್ಲಿ ಆರೋಗ್ಯ ಸದೃಢವಾಗಿರುತ್ತದೆ. ಸ್ವಚ್ಛತೆಯಿದ್ದಲ್ಲಿ ಮಾತ್ರ ನೆಮ್ಮದಿಯ ಸಂತೃಪ್ತಿಯ ಜೀವನ ನಡೆಸಲು ಸಾಧ್ಯ. ಈ ನಿಟ್ಟಿನಲ್ಲಿ ಸ್ವಚ್ಛ ಪರಿಸರದ ನಿರ್ಮಾತೃಗಳು ನಾವಾಗಬೇಕೆಂದು ಕರೆ ನೀಡಿ, ಸ್ವಚ್ಛ ಪರಿಸರ ನಿರ್ಮಾಣದ ಬಗ್ಗೆ ಜನ ಮೂಡಿಸುವ ಜಾಗೃತಿಯ ನಿಟ್ಟಿನಲ್ಲಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

<><*<><>*><>

ಹಗಲಿರುಳು ಸ್ವಚ್ಛತಾ ಕಾರ್ಯದಲ್ಲಿ ನಿರತರಾಗಿ ನಗರ, ಪಟ್ಟಣಗಳ ಸೌಂದರ್ಯ ಹಾಗೂ ಸಾರ್ವಜನಿಕ ಆರೋಗ್ಯ ಸಂರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುವ ಪೌರ ಕಾರ್ಮಿಕರನ್ನು ಕಸದವರು ಎನ್ನುವ ಸಾರ್ವಜನಿಕರ ಧೋರಣೆ ಬದಲಾಗಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಕರೆ ನೀಡಿದರು. ಚಿಕ್ಕಬಳ್ಳಾಪುರ ನಗರಸಭೆ ಆವರಣದಲ್ಲಿ ಇಂದು ಆಯೋಜಿಸಲಾಗಿದ್ದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪೌರಕಾರ್ಮಿಕರನ್ನು ಕಸದವರು ಎನ್ನುವ ತಾತ್ಸಾರದ ಮಾತು ಸರಿಯಲ್ಲ. ಕಸ ಉತ್ಪತ್ತಿ ಮಾಡುವವರು, ಕಸ ಸೃಷ್ಟಿಸುವವರು ಮತ್ತು ಕಸ ತ್ಯಾಜ್ಯಗಳನ್ನು ರಸ್ತೆ,ಬೀದಿ ಬದಿಗಳಲ್ಲಿ ಸುರಿದು ಅನೈರ್ಮಲ್ಯ ಉಂಟು ಮಾಡುವವರೇ ನಿಜವಾದ ಕಸಗಾರರು. ಸಾರ್ವಜನಿಕರು ಹಾಕಿದ ಕಸವನ್ನು ತೆಗೆದು ಶುಚಿ ಮಾಡುವವರು ಸ್ವಚ್ಛತಾ ದೇವರುಗಳು ಎಂದು ಪೌರಕಾರ್ಮಿಕರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.  ಪೌರಕಾರ್ಮಿಕರು ತಮ್ಮ ವೈಯಕ್ತಿಕ ಮತ್ತು ಕುಟುಂಬದ ಶುಚಿತ್ವ, ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ಮಕ್ಕಳ ಶಿಕ್ಷಣದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಲಹೆ ಮಾಡಿದರು.

<><*<><>*><>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ೧೧೦ ಹಳ್ಳಿಗಳಿಗೆ ಕಾವೇರಿ ಕುಡಿಯುವ ನೀರು ಒದಗಿಸುವ ಕಾವೇರಿ ೫ ನೇ ಹಂತದ ಕುಡಿಯುವ ನೀರು ಪೂರೈಕೆ ಕಾಮಗಾರಿಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪರಿಶೀಲನೆ ನಡೆಸಿದರು. ಕೆಂಗೇರಿ-ಉತ್ತರಹಳ್ಳಿ ಮುಖ್ಯ ರಸ್ತೆಯ ಬಳಿ ಕಾಮಗಾರಿಯನ್ನು ಉಪಮುಖ್ಯಮಂತ್ರಿಯವರು ವೀಕ್ಷಣೆ ಮಾಡಿದರು. ಯಶವಂತಪುರ ಶಾಸಕ ಎಸ್.ಟಿ.ಸೋಮಶೇಖರ್, ಬೆಂಗಳೂರು ಜಲಮಂಡಳಿಯ ಅಧ್ಯಕ್ಷ ರಾಮಪ್ರಸಾತ್ ಮನೋಹರ್ ಮತ್ತಿತರರು ಉಪಸ್ಥಿತರಿದ್ದರು.

<><*<><>*><>

ಬುಡಕಟ್ಟು ಗ್ರಾಮಗಳನ್ನು ಸುಧಾರಣೆ ಮಾಡಲು ಪ್ರಧಾನಮಂತ್ರಿ ಜನಜಾತಿಯ ಉನ್ನತ ಗ್ರಾಮ ಅಭಿಯಾನ ಬಾಗಲಕೋಟೆ ಜಿಲ್ಲೆಯಲ್ಲಿ ಅಕ್ಟೋಬರ್ ೨ ರಂದು ಚಾಲನೆ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಕೆ.ಎಂ.ಜಾನಕಿ ಹೇಳಿದ್ದಾರೆ. ಜಿಲ್ಲಾಧಿಕಾರಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು, ಈಗಾಗಲೇ ಅಭಿಯಾನಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಬುಡಕಟ್ಟು ಸಮುದಾಯಗಳ ಸಾಮಾಜಿಕ, ಆರ್ಥಿಕ ಸ್ಥಿತಿಯನ್ನು ಸುಧಾರಿಸಲು ೭೯ ಸಾವಿರದ ೧೫೬ ಕೋಟಿ ರೂಪಾಯಿ ವೆಚ್ಚವಾಗಲಿದೆ ಎಂದರು. ಜಿಲ್ಲೆಯಲ್ಲಿ ೫ ಬ್ಲಾಕ್‌ಗಳಿದ್ದು, ಹಲಗಲಿ, ಪರ್ವತಿ, ಹಾನಪುರ ಎಸ್.ಪಿ, ನರಸಾಪೂರ, ಆಡಗಲ್, ಹೂವಿನಹಳ್ಳಿ, ಮುರಡಿ ಗ್ರಾಮಗಳು ಒಳಗೊಂಡಿದ್ದು, ಮುಂದಿನ ಐದು ವರ್ಷಗಳಿಗೆ ಅಭಿವೃದ್ಧಿ ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ. ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಕ್ರಿಯಾ ಯೋಜನೆಯಡಿ ಮೂಲ ಸೌಕರ್ಯಗಳನ್ನು ಸಕ್ರಿಯಗೊಳಿಸುವುದು, ಆರ್ಥಿಕ ಸಬಲೀಕರಣದ ಪ್ರಚಾರ, ಉತ್ತಮ ಶಿಕ್ಷಣ ಪ್ರವೇಶ, ಆರೋಗ್ಯಕರ ಜೀವನ ಈ ಯೋಜನೆಯಲ್ಲಿ ಒಳಗೊಂಡಿದೆ ಎಂದು ಜಿಲ್ಲಾಧಿಕಾರಿ ಕೆ.ಎಂ.ಜಾನಕಿ ತಿಳಿಸಿದ್ದಾರೆ.

<><*<><>*><>

ರಾಜ್ಯಪಾಲರದ್ದು ಅತ್ಯಂತ ಜವಾಬ್ದಾರಿಯುತ ಮತ್ತು ಗೌರವಯುತ ಸ್ಥಾನ. ಪ್ರಥಮಬಾರಿಗೆ ಸರ್ಕಾರದ ದಿನನಿತ್ಯದ ಆಡಳಿತದ ಬಗ್ಗೆ ಮಾಹಿತಿ ಕೇಳುತ್ತಿದ್ದಾರೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂವಿಧಾನದ ಆಶಯಗಳನ್ನು ಯಾವ ರೀತಿ ರಕ್ಷಣೆ ಮಾಡಬೇಕು ಎಂಬುದು ರಾಜ್ಯಪಾಲರ ಜವಾಬ್ದಾರಿಯಾಗಿದೆ. ದಿನನಿತ್ಯ ಆಡಳಿತ ಮಾಡುವ ಅಧಿಕಾರ ಮುಖ್ಯಮಂತ್ರಿಯವರಿಗೆ ಮತ್ತು ಸರ್ಕಾರಕ್ಕೆ ಇದೆ. ಆದರೆ, ಪ್ರಥಮಬಾರಿಗೆ ರಾಜ್ಯಪಾಲರು, ಸರ್ಕಾರದ ದಿನನಿತ್ಯದ ಆಡಳಿತದ ಬಗ್ಗೆ ಮಾಹಿತಿ ಕೇಳುವುದಾಗಲಿ ಅಥವಾ ಮಧ್ಯಪ್ರವೇಶಿಸುವುದನ್ನಾಗಲಿ ಎಲ್ಲಿಯೂ ಕೇಳಿಲ್ಲ ಎಂದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>